# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನಬಾರ್ಡ್ ಆರ್‌ಐಡಿಎಫ್ ಯೋಜನೆ (ಸಾಮಾನ್ಯ) ಯಡಿ ಅನುಷ್ಠಾನಗೊಳಿಸಲಾಗುತ್ತಿರುವ ಕಾಮಗಾರಿಗಳಿಗೆ ಪ್ರಸಕ್ತ 2017-18ನೇ ಸಾಲಿನಲ್ಲಿ ದ್ವಿತೀಯ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:149/1:ಆರ್‌ಆರ್‌ಸಿ: 2012 ದಿನಾಂಕ 09.10.2013.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:40:ಆರ್‌ಆರ್‌ಸಿ: 2014, ದಿನಾಂಕ 28.04.2014.
3. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಗ್ರಾಅಪ:149/5: ಆರ್‌ಆರ್‌ಸಿ:2012, ದಿನಾಂಕ 25.11.2014.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:85:ಆರ್‌ಆರ್‌ಸಿ:14, ದಿನಾಂಕ 14-10-2014.
5. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:31:ಆರ್‌ಆರ್‌ಸಿ:2015, ದಿನಾಂಕ 06.03.2015.
6. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:31/1:ಆರ್‌ಆರ್‌ಸಿ: 2015, ದಿನಾಂಕ 08.04.2015.
7. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:45:ಆರ್‌ಆರ್‌ಸಿ: 2016, ದಿನಾಂಕ 24.05.2016.
8. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:77:ಆರ್‌ಆರ್‌ಸಿ: 2016, ದಿನಾಂಕ 06.01.2017.
9. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:188:ಆರ್‌ಆರ್‌ಸಿ:2017, ದಿನಾಂಕ 03.05.2017.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಅಪಂರಾ ರವರು ಸಂ:ಗ್ರಾಅಪ:244:ಪಿಬಿಎಸ್:2017 ದಿನಾಂಕ 17.07.2017.

## ಪ್ರಸ್ತಾವನೆ:

ನಬಾರ್ಡ್ ಸಂಸ್ಥೆಯ ನೆರವಿನಡಿ ಆರ್‌ಐಡಿಎಫ್ ರಡಿ ಮೇಲೆ ಓದಲಾದ (1) ರಿಂದ (8) ವರೆಗಿನ ಸರ್ಕಾರಿ ಆದೇಶಗಳಲ್ಲಿ ನಬಾರ್ಡ್ ಯೋಜನೆಯ ಆರ್.ಐ.ಡಿ.ಎಫ್. ವಿವಿಧ ಮಾಲಿಕೆಗಳಡಿ ರಸ್ತೆ ಮತ್ತು ಸೇತುವೆ ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ(9)ರ ಆದೇಶದಲ್ಲಿ ನಬಾರ್ಡ್ ಆರ್‌ಐಡಿಎಫ್ ವಿವಿಧ ಮಾಲಿಕೆಗಳಡಿ ಜಿಲ್ಲಾ ಪಂಚಾಯತಿಗಳು ಕೈಗೊಂಡು ಪ್ರಗತಿ ಹೊಂದಿರುವ ಗ್ರಾಮೀಣ ರಸ್ತೆ ಮತ್ತು ಸೇತುವೆ ಕಾಮಗಾರಿಗಳ ಬಿಲ್ ಪಾವತಿಗಾಗಿ ಈಗಾಗಲೇ ಮೊದಲ ತ್ರೈಮಾಸಿಕ ಕಂತಿನ ಅನುದಾನ ರೂ.12.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಪ್ರಸ್ತುತ 2017-18ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ:5054-03-337-0-74-436 ರಡಿ ಒದಗಿಸಲಾದ ರೂ.48.00 ಕೋಟಿಗಳಲ್ಲಿ ದ್ವಿತೀಯ ತ್ರೈಮಾಸಿಕ ಕಂತಿನ ಅನುದಾನ ರೂ.12.00 ಕೋಟಿಗಳನ್ನು ನಬಾರ್ಡ್ ರಸ್ತೆ ಮತ್ತು ಸೇತುವೆ ಕಾಮಗಾರಿಗಳ ಬಿಲ್ ಪಾವತಿಗಾಗಿ ಜಿಲ್ಲಾ ಪಂಚಾಯತಿಗಳಿಗೆ ಅನುಬಂಧದಲ್ಲಿರುವಂತೆ ಬಿಡುಗಡೆಗೊಳಿಸಲು ಸರ್ಕಾರವು ತೀರ್ಮಾನಿಸಿದೆ.

ಆದ್ದರಿಂದ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:188/1:ಆರ್‌ಆರ್‌ಸಿ:2017, ಬೆಂಗಳೂರು, ದಿನಾಂಕ19.08.2017.**

ನಬಾರ್ಡ್ ಆರ್‌ಐಡಿಎಫ್ ವಿವಿಧ ಮಾಲಿಕೆಗಳಡಿ ಜಿಲ್ಲಾ ಪಂಚಾಯತಿಗಳು ಕೈಗೊಂಡು, ಪ್ರಗತಿ ಹೊಂದಿರುವ ಗ್ರಾಮೀಣ ರಸ್ತೆ ಮತ್ತು ಸೇತುವೆ ಕಾಮಗಾರಿಗಳ ಬಿಲ್ ಪಾವತಿಸಲು ರೂ.12.00 ಕೋಟಿಗಳನ್ನು (ರೂಪಾಯಿಗಳು ಹನ್ನೆರಡು ಕೋಟಿಗಳು ಮಾತ್ರ) ಲೆಕ್ಕ ಶೀರ್ಷಿಕೆ-5054-03-337-0-74-436 ರಡಿ

ಜಿಲ್ಲಾ ಪಂಚಾಯಿತಿಗಳಿಗೆ ಅನುಬಂಧದಲ್ಲಿರುವಂತೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ. ಸದರಿ ಬಿಡುಗಡೆ ಮಾಡಿರುವ ಅನುದಾನವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ವಿನಿಯೋಗಿಸಲು ಆದೇಶಿಸಿದೆ.

ಷರತ್ತುಗಳು

1. ಈ ಅನುದಾನವನ್ನು ಅನುಮೋದನೆಯಾದ ನಬಾರ್ಡ್ ಮಾಲಿಕೆಯ ಕಾಮಗಾರಿಯ ಹೊರತು ಬೇರೆ ಯಾವುದೇ ಕಾಮಗಾರಿಗಳಿಗೆ ಉಪಯೋಗಿಸಬಾರದು. ಮುಂದುವರೆಯುತ್ತಾ, ಯಾವುದೇ ನಬಾರ್ಡ್ ಮಾಲಿಕೆಯಡಿ ಕಾಮಗಾರಿಗಳು ಅನುಮೋದನೆಗೊಂಡಿದಲ್ಲಿ, ಇನ್ಯಾವುದೇ ಮಾಲಿಕೆಯಡಿ ಬಿಡುಗಡೆಗೊಳಿಸಲಾಗಿರುವ ಅನುದಾನವನ್ನು ಅವಶ್ಯಕತೆ ಹಾಗೂ ಆದ್ಯತೆ ಮೇರೆಗೆ ವಿನಿಯೋಗಿಸಲು ಅವಕಾಶ ಕಲ್ಪಿಸಲಾಗಿದೆ.
2. **ಜಿಲ್ಲಾ ಪಂಚಾಯಿತಿಗಳಿಗೆ ನಬಾರ್ಡ್ ಯೋಜನೆಯಡಿ ಕೆರೆಗಳ ದುರಸ್ತಿ ಮತ್ತು ಪುನಶ್ಚೇತನ ಕಾಮಗಾರಿಗಳಿಗೆ ಬಿಡುಗಡೆ ಅನುದಾನವನ್ನು ತುರ್ತಾಗಿ ಒಂದು ವಾರದೊಳಗೆ ಅನುಷ್ಠಾನ ಅಧಿಕಾರಿಗಳಿಗೆ ಮರು ಬಿಡುಗಡೆ ಮಾಡುವುದು**
3. **ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆರವರು ನಬಾರ್ಡ್ ಯೋಜನೆಯ ಎಲ್ಲಾ ಅನುಮೋದಿತ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅನುಷ್ಠಾನದ ಜವಾಬ್ದಾರಿಯನ್ನು ನಿರ್ವಹಿಸುವುದು ಹಾಗೂ ಅನುಷ್ಠಾನಗೊಂಡ ಕಾಮಗಾರಿಗಳ ಮರುಪಾವತಿ ಬಿಲ್ಲುಗಳನ್ನು ಕಾರ್ಯಪಾಲಕ ಅಭಿಯಂತರರಿಂದ ಪಡೆದು ಸರ್ಕಾರಕ್ಕೆ ಸಲ್ಲಿಸುವುದು ಮತ್ತು ಸರ್ಕಾರಕ್ಕೆ ಕಾಲಕಾಲಕ್ಕೆ ಪ್ರಗತಿಯ ವರದಿಯನ್ನು ನೀಡತಕ್ಕದ್ದು.**
4. ಈ ಕಾರ್ಯಕ್ರಮದಡಿ ರಸ್ತೆ ಮತ್ತು ಸೇತುವೆ ಕಾಮಗಾರಿಗಳಿಗೆ ಬಿಡುಗಡೆ ಮಾಡಿದ ಅನುದಾನದಲ್ಲಿ ಭರಿಸಿದ ವೆಚ್ಚಕ್ಕೆ ಅನುಗುಣವಾಗಿ ನಬಾರ್ಡ್ ಮರುಪಾವತಿ ಕ್ಲೈಮ್ ಬಿಲ್ಲುಗಳನ್ನು ಒಂದು ತಿಂಗಳೊಳಗೆ ಸಲ್ಲಿಸತಕ್ಕದ್ದು.
5. ಬಳಕೆಯಾದ ಹಣ ಹಾಗೂ ಕಾಮಗಾರಿ ಪ್ರಗತಿಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಇವರಿಗೆ ಒದಗಿಸತಕ್ಕದ್ದು.
6. ಕಾಮಗಾರಿಗಳ ವಿವರವನ್ನು ನಬಾರ್ಡ್‌ನ ನಿಯಮಗಳಂತೆ ಗ್ರಾಮ ಪಂಚಾಯತಿಯ ಸೂಚನಾ ಫಲಕಗಳಲ್ಲಿ ಹಾಗೂ ಕಾಮಗಾರಿಗಳನ್ನು ನಡೆಸುತ್ತಿರುವ ಸ್ಥಳಗಳಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು, ಗ್ರಾಮ ಪಂಚಾಯತಿಯ ಸೂಚನಾ ಫಲಕಗಳಲ್ಲಿ ವಿವರಗಳನ್ನು ಬರೆಸುವ ಜವಾಬ್ದಾರಿ ಆಯಾ ಜಿಲ್ಲಾ ಪಂಚಾಯತಿಯ ಇಂಜಿನಿಯರಿಂಗ್ ವಿಭಾಗದ ಅಧಿಕಾರಿಗಳದ್ದಾಗಿರುತ್ತದೆ.
7. ಬಳಕೆಯಾದ ಹಣ ಕುರಿತಂತೆ ಈ ಯೋಜನೆಯಡಿಯ ಎಲ್ಲಾ ಕಾಮಗಾರಿಗಳ Project Completion Report ನ್ನು ಸರ್ಕಾರಕ್ಕೆ ಹಾಗೂ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಗೆ ಒದಗಿಸತಕ್ಕದ್ದು.
8. ಈ ಯೋಜನೆಯ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿದ ಬಳಿಕ ಕಾಮಗಾರಿಗಳ ಬಿಲ್ಲುಗಳನ್ನು ಪಾವತಿ ಮಾಡುವುದು ಕಡ್ಡಾಯವಾಗಿರುತ್ತದೆ.
9. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಹಣವನ್ನು ಜಿಲ್ಲಾ ಖಜಾನೆಯು ಪ್ರಸ್ತುತ ವರ್ಷಕ್ಕೆ ನಿಗಧಿಗೊಳಿಸುವ ದಿನಾಂಕದೊಳಗೆ ಡ್ರಾ ಮಾಡಿ ವಿನಿಯೋಗಿಸತಕ್ಕದ್ದು.
10. ಜಿಲ್ಲಾ ಪಂಚಾಯತಿಗಳು ಮುಂದಿನ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಬೇಡಿಕೆ ಸಲ್ಲಿಸುವ ಮುನ್ನ ಈ ಆದೇಶದಲ್ಲಿ ಬಿಡುಗಡೆ ಮಾಡಿದ ಶೇಕಡ 75ರಷ್ಟು ವೆಚ್ಚ ಕಡ್ಡಾಯವಾಗಿ ಭರಿಸತಕ್ಕದ್ದು. ಇಲ್ಲದಿದ್ದಲ್ಲಿ ಮುಂದಿನ ಕಂತಿನ ಅನುದಾನ ಬಿಡುಗಡೆ ಮಾಡಲಾಗುವುದಿಲ್ಲ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಕಂಡಿಕೆ ಟಿಪ್ಪಣಿ ಸಂಖ್ಯೆ: ಗ್ರಾಅಪ:244:ಪಿಬಿಎಸ್:2017 ದಿನಾಂಕ:17.07.2017 ರ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ. ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಆಡಿಟ್-1) ಕರ್ನಾಟಕ, ಬೆಂಗಳೂರು
3. ಮಹಾಲೇಖಪಾಲರು (ಆಡಿಟ್-2) ಕರ್ನಾಟಕ, ಬೆಂಗಳೂರು
4. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ರವರ ಆಪ್ತ ಕಾರ್ಯದರ್ಶಿಗಳು.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
6. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
8. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (ಪಿಎಂಯು) (ಐಎಫ್) 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
9. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ, ಕಟ್ಟಡ, ಬೆಂಗಳೂರು
10. ವಿಶೇಷಾಧಿಕಾರಿಗಳು, (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಕರ್ನಾಟಕ ವಿಧಾನ ಸಭೆಯ ಮಾನ್ಯ ವಿರೋದ ಪಕ್ಷದ ನಾಯಕರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
13. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
14. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನಾ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
15. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು
16. ಅಧೀನ ಕಾರ್ಯದರ್ಶಿ, ವೆಚ್ಚ-6, ಜಿ.ಪಂ, ಆರ್ಥಿಕ ಇಲಾಖೆ, ಬೆಂಗಳೂರು
17. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
18. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
19. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. ಬಹುಮಹಡಿ ಕಟ್ಟಡ, ಬೆಂಗಳೂರು
20. ವಿಶೇಷಾಧಿಕಾರಿಗಳು, (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು,

ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು

21. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
22. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನಾ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
23. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು
24. ಮುಖ್ಯ ಇಂಜನಿಯರ್, ಪಂಚಾಯತ್‌ರಾಜ್ ಇಂಜನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು.-9
25. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
26. ಎಲ್ಲಾ ಪಂಚಾಯತ್ ರಾಜ್ ಇಂಜನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರರು
27. ಎಲ್ಲಾ ಪಂಚಾಯತ್ ರಾಜ್ ಇಂಜನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಅಭಿಯಂತರರು
28. ವೈಬ್‌ಸೈಟ್/ಮಾಹಿತಿಕೇಂದ್ರ-(10 ಪ್ರತಿಗಳು), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. ಬಹುಮಹಡಿ ಕಟ್ಟಡ, ಬೆಂಗಳೂರು
29. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

## ಅನುಬಂಧ

ನಬಾರ್ಡ್ ಆರ್‌ಐಡಿಎಫ್ ರಡಿ ಜಿಲ್ಲಾ ಪಂಚಾಯತ್‌ಗಳಿಗೆ 2017-18ನೇ ಸಾಲಿನ ಲೆಕ್ಕ ಶೀರ್ಷಿಕೆ-5054-03-337-0-74-436 ರಡಿ ದ್ವಿತೀಯ ತ್ರೈಮಾಸಿಕ ಅವಧಿಗೆ ಬಿಡುಗಡೆ ಮಾಡಿದ ಅನುದಾನದ ವಿವರ.

ಸರ್ಕಾರದ ಆದೇಶ ಸಂ:ಗ್ರಾಅಪ:188/1:ಆರ್‌ಆರ್‌ಸಿ:2017,ಬೆಂಗಳೂರು ದಿ:19-8-2017ರ ಲಗತ್ತು

(ರೂ.ಲಕ್ಷಗಳಲ್ಲಿ)

| ಕ್ರ. ಸಂ. | ಜಿಲ್ಲೆ | ಆರ್‌ಐಡಿಎಫ್‌ನಡಿ ರಸ್ತೆ ಮತ್ತು ಸೇತುವೆ ಕಾಮಗಾರಿಗಳ ವಿವರ | | ಈಗಾಗಲೇ ಬಿಡುಗಡೆ ಮಾಡಿದ ಅನುದಾನ | ಈ ಆದೇಶದಂತೆ 2017-18 ನೇ ಸಾಲಿಗೆ ಎರಡನೇ ಕಂತಿನಲ್ಲಿ ಬಿಡುಗಡೆ ಮಾಡಿದ ಅನುದಾನ |
|---|---|---|---|---|---|
| | | ಸಂಖ್ಯೆ | ಒಟ್ಟು ಅಂದಾಜು ಮೊತ್ತ | | |
| 1 | 2 | 3 | 4 | 5 | 6 |
| 1 | ಬಾಗಲಕೋಟೆ | 40 | 1724.00 | 0.00 | 0.00 |
| 2 | ಬೆಂಗಳೂರು (ನ) | 16 | 730.00 | 7.68 | 0.00 |
| 3 | ಬೆಂಗಳೂರು (ಗ್ರಾ) | 22 | 810.00 | 0.00 | 10.00 |
| 4 | ಬೆಳಗಾಂ | 49 | 2785.00 | 180.00 | 250.00 |
| 5 | ಬಳ್ಳಾರಿ (ಹಡಗಲಿ) | 18 | 1268.00 | 40.00 | 55.00 |
| 6 | ಬೀದರ್ | 15 | 1220.00 | 50.00 | 0.00 |
| 7 | ವಿಜಯಪುರ | 19 | 1580.00 | 5.00 | 0.00 |
| 8 | ಚಿಕ್ಕಮಗಳೂರು | 13 | 650.00 | 50.35 | 0.00 |
| 9 | ಚಿಕ್ಕಬಳ್ಳಾಪುರ | 6 | 350.00 | 15.00 | 0.00 |
| 10 | ಚಾಮರಾಜನಗರ | 13 | 735.00 | 0.00 | 0.00 |
| 11 | ಚಿತ್ರದುರ್ಗ | 26 | 1297.00 | 8.29 | 20.00 |
| 12 | ದಕ್ಷಿಣ ಕನ್ನಡ | 28 | 1720.00 | 39.68 | 235.00 |
| 13 | ದಾವಣಗೆರೆ | 38 | 1742.00 | 70.00 | 75.00 |
| 14 | ಧಾರವಾಡ | 23 | 1348.00 | 0.00 | 100.00 |
| 15 | ಗದಗ | 18 | 1485.00 | 80.00 | 100.00 |
| 16 | ಕಲಬುರಗಿ | 20 | 1695.00 | 50.00 | 50.00 |
| 17 | ಹಾಸನ | 33 | 1028.00 | 55.00 | 20.00 |
| 18 | ಹಾವೇರಿ | 33 | 1140.00 | 72.00 | 80.00 |
| 19 | ಕೋಲಾರ | 24 | 940.00 | 65.00 | 0.00 |
| 20 | ಕೊಡಗು | 7 | 250.00 | 15.00 | 0.00 |
| 21 | ಕೊಪ್ಪಳ | 17 | 688.00 | 0.00 | 40.00 |
| 22 | ಮಂಡ್ಯ | 31 | 1415.00 | 65.00 | 25.00 |
| 23 | ಮೈಸೂರು | 24 | 1095.00 | 50.00 | 25.00 |
| 24 | ರಾಮನಗರ | 8 | 345.00 | 32.00 | 0.00 |
| 25 | ರಾಯಚೂರು | 10 | 496.50 | 0.00 | 0.00 |
| 26 | ಶಿವಮೊಗ್ಗ | 30 | 1030.00 | 70.00 | 25.00 |
| 27 | ತುಮಕೂರು | 38 | 1575.00 | 22.00 | 70.00 |
| 28 | ಉತ್ತರ ಕನ್ನಡ | 37 | 1393.50 | 100.00 | 20.00 |
| 29 | ಉಡುಪಿ | 18 | 644.00 | 58.00 | 0.00 |
| 30 | ಯಾದಗಿರಿ. | 7 | 330.00 | 0.00 | 0.00 |
| | ಒಟ್ಟು | 681 | 33509.00 | 1200.00 | 1200.00 |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ.ಮೂವನಹಳ್ಳಿ ನಾಗರಾಜ್)
ನಿರ್ದೇಶಕರು
ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.